**Bangalore**
**Regional News**
**24.10.2024 / 2.30 P.M.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಬೆಂಗಳೂರಿನಲ್ಲಿ ಅನಧಿಕೃತ ಕಟ್ಟಡಗಳಿಗೆ ಅಧಿಕಾರಿಗಳೇ ನೇರ ಹೊಣೆ - ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ

೨. ವಿಧಾನಸಭೆ ಉಪಚುನಾವಣೆ; ಕಾಂಗ್ರೆಸ್ ಚನ್ನಪಟ್ಟಣ ಅಭ್ಯರ್ಥಿಯಾಗಿ ಸಿ.ಪಿ.ಯೋಗೇಶ್ವರ್ - ಸಂಡೂರಿನಲ್ಲಿ ಅನ್ನಪೂರ್ಣ ಉಮೇದುವಾರಿಕೆ

೩. ವಿಧಾನಪರಿಷತ್ ಉಪ ಚುನಾವಣೆ; ಬಿಜೆಪಿ ಅಭ್ಯರ್ಥಿ ಕಿಶೋರ್ ಕುಮಾರ್ ಗೆಲುವು

೪. ವರ್ಷದ ಬಳಿಕ ತೆರೆದ ಹಾಸನಾಂಬೆ ದೇಗುಲ; ನಾಳೆಯಿಂದ ಭಕ್ತರಿಗೆ ದರ್ಶನ

೫. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಧಾರಕಾರ ಮಳೆಯ ಮುನ್ಸೂಚನೆ

****************

ಬೆಂಗಳೂರಿನ ಕಟ್ಟಡ ಕುಸಿತ ಪ್ರಕರಣದಲ್ಲಿ ಮೃತಪಟ್ಟವರಿಗೆ ಸರ್ಕಾರ ೫ ಲಕ್ಷ ರೂಪಾಯಿ ಪರಿಹಾರ ಘೋಷಣೆ ಮಾಡಿದೆ. ಘಟನೆಯಲ್ಲಿ ಗಾಯಗೊಂಡವರ ಚಿಕಿತ್ಸೆಯನ್ನು ಸರ್ಕಾರವೇ ಸಂಪೂರ್ಣವಾಗಿ ಭರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ

ನಿರ್ಮಾಣ ಹಂತದ ಕಟ್ಟಡ ಕುಸಿತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು ಗಾಯಗೊಂಡವರಿಗೆ ಚಿಕಿತ್ಸೆ ಜೊತೆಗೆ ಪರಿಹಾರ ನೀಡಲು ಸರ್ಕಾರ ಚಿಂತನೆ ನಡೆಸಿದೆ ಎಂದು ಹೇಳಿದ್ದಾರೆ. ಜನರು ಕಾನೂನಿನ ಪ್ರಕಾರ ಮನೆಗಳನ್ನು ನಿರ್ಮಿಸಬೇಕೇ ಹೊರತು ಕಾನೂನು ಬಾಹಿರವಾಗಿ ಮನೆಗಳನ್ನು ಕಟ್ಟಬಾರದೆಂದು ಮುಖ್ಯಮಂತ್ರಿ ಮನವಿ ಮಾಡಿದ್ದಾರೆ. ಇನ್ನು ಮುಂದೆ ಯಾವುದೇ ಕಾರಣಕ್ಕೂ ಅನಧಿಕೃತ ಕಟ್ಟಡಗಳಿಗೆ ಅನುಮತಿ ನೀಡಬಾರದು. ಒಂದು ವೇಳೆ ನಿರ್ಮಿಸಿದರೆ, ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಧ್ವನಿ: ಮುಖ್ಯಮಂತ್ರಿ

ಇದಕ್ಕೂ ಮೊದಲು ಘಟನಾ ಸ್ಥಳ ಪರಿಶೀಲನೆ ನಡೆಸಿದ ಮುಖ್ಯಮಂತ್ರಿಗಳು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು.

ನಿರ್ಮಾಣ ಹಂತದ ಕಟ್ಟಡ ಕುಸಿತ ಪ್ರಕರಣದಲ್ಲಿ ಸಾವನ್ನಪ್ಪಿದವರ ಸಂಖ್ಯೆ ಲಕ್ಕೇರಿದೆ. ಎಂಟು ಮಂದಿಯನ್ನು ರಕ್ಷಣೆ ಮಾಡಲಾಗಿದ್ದು, ಆರು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಉಳಿದವರ ಸ್ಥಿತಿ ಗಂಭೀರವಾಗಿದೆ.

***************

ವಿಧಾನಸಭಾ ಉಪ ಚುನಾವಣೆಯ ಚನ್ನಪಟ್ಟಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಇಂದು ನಾಮಪತ್ರ ಸಲ್ಲಿಸಿದರು.

ಇದಕ್ಕೂ ಮೊದಲು ಕಾಂಗ್ರೆಸ್ ಕಚೇರಿಯಿಂದ ಆರಂಭವಾದ ಮೆರವಣಿಗೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಸಚಿವರು ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಯೋಗೇಶ್ವರ್ ಅವರನ್ನು ಕನಿಷ್ಠ ೫೦ ಸಾವಿರ ಮತಗಳ ಅಂತರದಿಂದ ಗೆಲ್ಲಿಸುವಂತೆ ಮನವಿ ಮಾಡಿದರು. ಚನ್ನಪಟ್ಟಣದ ಸಂಪೂರ್ಣ ಅಭಿವೃದ್ಧಿ ಕಾಂಗ್ರೆಸ್ ಸರ್ಕಾರದ ಜವಾಬ್ದಾರಿ ಎಂದು ತಿಳಿಸಿದರು.

ಚನ್ನಪಟ್ಟಣ ಅಭ್ಯರ್ಥಿ ವಿಚಾರವಾಗಿ ಪಕ್ಷದ ಯಾವುದೇ ಕಾರ್ಯಕರ್ತರು ಹಾಗೂ ಮುಖಂಡರಲ್ಲಿ ಅಸಮಾಧಾನವಿಲ್ಲ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪಕ್ಷದ ಹಿvದೃಷ್ಟಿಯಿಂದ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಇದೇ ವೇಳೆ ಶಿಗ್ಗಾಂವಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಹೆಸರನ್ನು ಶೀಘ್ರವೇ ಪ್ರಕಟಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಇನ್ನೊಂದೆಡೆ ಅಭ್ಯರ್ಥಿಗಳ ವಿಚಾರದಲ್ಲಿ ಪಕ್ಷದ ತೀರ್ಮಾನಕ್ಕೆ ಎಲ್ಲರೂ ಬದ್ಧವಾಗಿರಬೇಕು ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಬೆಂಗಳೂರಿನಲ್ಲಿ ತಿಳಿಸಿದ್ದಾರೆ.

***************

ಸಂಡೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಇಂದು ಸಂಸದ ತುಕರಾಂ ಪತ್ನಿ ಅನ್ನಪೂರ್ಣ ನಾಮಪತ್ರ ಸಲ್ಲಿಸಿದರು.

ಸಂಡೂರು ಪಟ್ಟಣದ ಎಪಿಎಂಸಿ ಮಾರುಕಟ್ಟೆ ಬಳಿಯಿಂದ ತೆರೆದ ವಾಹನದಲ್ಲಿ ಸಚಿವರು, ಶಾಸಕರು, ಸಂಸದರು, ಮುಖಂಡರೊಂದಿಗೆ ಆಗಮಿಸಿ ಉಮೇದುವಾರಿಕೆ ಸಲ್ಲಿಸಿದರು.

ನಾಮ ಪತ್ರ ಸಲ್ಲಿಸಿದ ಬಳಿಕ ಮಾತನಾಡಿದ ಅಭ್ಯರ್ಥಿ ಅನ್ನಪೂರ್ಣ, ಸಚಿವ ಸಂತೋಷ್ ಲಾಡ್ ಹಾಗೂ ಪತಿ ತುಕರಾಂ ಅವರ ಮಾರ್ಗದರ್ಶನದಿಂದ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವೆ ಎಂದು ಹೇಳಿದರು.

ಸಂಡೂರು ವಿಧಾನಸಭೆ ಉಪಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆಯು ಕಟ್ಟುನಿಟ್ಟಾಗಿ ಜಾರಿಯಲ್ಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದ್ದಾರೆ.

****************

ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ರಾಜಿನಾಮೆಯಿಂದ ತೆರವಾಗಿದ್ದ ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್‌ಗೆ ನಡೆದ ಉಪ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ  ಕಿಶೋರ್ ಕುಮಾರ್ ಗೆಲುವು ಸಾಧಿಸಿದ್ದಾರೆ.

ಅವರು, ೧ ಸಾವಿರದ ೬೦೦ ಕ್ಕೂ ಅಧಿಕ ಮತಗಳ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿ ರಾಜು ಪೂಜಾರಿ ವಿರುದ್ಧ ಗೆಲುವು ಸಾಧಿಸಿದ್ದಾರೆ. ಒಂದು ಸಾವಿರದ ೯೫೭ಮತ ಗಳಿಸಿದ ಕಾಂಗ್ರೆಸ್ ಅಭ್ಯರ್ಥಿ ಎರಡನೇ ಸ್ಥಾನಕ್ಕೆ ತೃಪ್ತಿ ಪಟ್ಟಿದ್ದಾರೆ. ಈ ಕ್ಷೇತ್ರದಲ್ಲಿ ಒಟ್ಟು ೫ ಸಾವಿರದ ೯೦೬ ಮತಗಳು ಚಲಾವಣೆಯಾಗಿದ್ದವು.

****************

ವರ್ಷಕ್ಕೊಮ್ಮೆ ದರ್ಶನ ಭಾಗ್ಯ ಕರುಣಿಸುವ ಹಾಸನ ನಗರದ ಅಧಿದೇವತೆ ಹಾಸನಾಂಬೆಯ ಗರ್ಭಗುಡಿಯ ಬಾಗಿಲನ್ನು ಇಂದು ಶಾಸ್ರೋಕ್ತವಾಗಿ ತೆರೆಯಲಾಯಿತು.

ಸಚಿವರು, ಶಾಸಕರು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ಅರಸು ವಂಶಸ್ಥರು ಬಾಳೆಗಿಡ ಕಡಿದ ನಂತರ ಗರ್ಭಗುಡಿ ಬಾಗಿಲು ತೆರೆಯಲಾಯಿತು.

ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ, ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ ನಿರ್ಮಲಾನಂದಸ್ವಾಮೀಜಿ, ಸಿದ್ದಗಂಗಾ ಮಠದ ಸಿದ್ದಲಿಂಗೇಶ್ವರ ಸ್ವಾಮೀಜಿ, ಜಿಲ್ಲೆಯ ಸಂಸದ, ಶಾಸಕರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಇಂದಿನಿಂದ ನವೆಂಬರ್ ೩ರವರೆಗೆ ಜಾತ್ರಾಮಹೋತ್ಸವ ನಡೆಯಲಿದ್ದು, ನಾಳೆಯಿಂದ ನವೆಂಬರ್ ೨ ರವರೆಗೆ ಭಕ್ತರಿಗೆ ಹಾಸನಾಂಬೆ ದರ್ಶನ ದೊರೆಯಲಿದೆ.

ವರ್ಷದಲ್ಲಿ ಒಂದು ಬಾರಿ ಮಾತ್ರ ಈ ದೇವಾಲಯದ ಗರ್ಭಗುಡಿಯ ಬಾಗಿಲು ತೆರೆಯುವುದು ವಿಶೇಷವಾಗಿದೆ.

****************

ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಎರಡು ದಿನಗಳಿಂದ ಬಿಡುವು ನೀಡಿದ್ದ ಮಳೆ ಮತ್ತೆ ಆರಂಭಗೊಂಡಿದ್ದು, ಸಾಮಾನ್ಯ ಜನಜೀವನ ಭಾದಿತಗೊಂಡಿದೆ.

ಮಳೆಯಿಂದಾಗಿ ಮಾಯಕೊಂಡ, ಆನಗೋಡು, ಬಾಡ, ತ್ಯಾವಣಿಗೆ ಬಸವಾಪಟ್ಟಣ ಹೋಬಳಿಗಳಲ್ಲಿ ಕೊಯಿಲಿಗೆ ಬಂದಿದ್ದ ಭತ್ತ ಮೆಕ್ಕೆಜೋಳ ಮತ್ತು ತರಕಾರಿ ಬೆಳೆಗಳಿಗೆ ಹಾನಿಯಾಗಿದೆ.

ಬೆಳೆಹಾನಿ ಪ್ರದೇಶಗಳಿಗೆ ಕೃಷಿ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ನಷ್ಟದ ಅಂದಾಜು ಪರಿಶೀಲನೆ ನಡೆಸಿದ್ದಾರೆ.

ಜಿಲ್ಲಾದ್ಯಂತ ವಾಡಿಕೆಗಿಂತ ಅಧಿಕ ಪ್ರಮಾಣದಲ್ಲಿ ಮಳೆ ಸುರಿದ ಹಿನ್ನೆಲೆಯಲ್ಲಿ ಮೂವತ್ತಕ್ಕೂ ಅಧಿಕ ಕೆರೆಗಳು ಸಂಪೂರ್ಣ ಭರ್ತಿಯಾಗಿವೆ.

****************

ಬಂಗಾಳಕೊಲ್ಲಿಯಲ್ಲಿನ ಡಾನಾ ಚಂಡಮಾರುತದಿಂದಾಗಿ ರಾಜ್ಯದ ಹಲವೆಡೆ ಧಾರಕಾರ ಮಳೆ ಸುರಿಯುತ್ತಿದೆ.

ಇಂದು ಮಂಡ್ಯ, ಚಾಮರಾಜನಗರ, ಮೈಸೂರು ಜಿಲ್ಲೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ.

ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಕೊಡಗು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಂಭವವಿದೆ.

ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಬೆಂಗಳೂರಿನಲ್ಲಿ ಮೋಡಕವಿದ ಆಕಾಶವಿದ್ದು, ಸಂಜೆಯ ವೇಳೆಗೆ ಗುಡುಗು ಸಹಿತ ಭಾರೀ ಮಳೆಯಾಗುವ ಸಂಭವವಿದೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

***************

ವಿಜಯಪುರ ಜಿಲ್ಲೆಯಲ್ಲಿ ಡೋಣಿ ನದಿಯಿಂದ ಉಂಟಾಗುವ ಪ್ರವಾಹ ಪರಿಸ್ಥಿತಿ ತಡೆಯಲು ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಟಿ.ಭೂಬಾಲನ್ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಸಿಇಓ ರಿಷಿ ಆನಂದ್ ಜಂಟಿಯಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಡೋಣಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆಗಳಲ್ಲಿ ಹೂಳು ತುಂಬಿಕೊಂಡು ಸೇತುವೆಯ ಎತ್ತರ ಕಡಿಮೆಯಾಗಿ ನೀರಿನ ಶೇಖರಣೆ ಸಾಧ್ಯವಾಗುತ್ತಿಲ್ಲ. ನದಿಯಲ್ಲಿ ಹರಿಯುವ ನೀರಿನ ಒತ್ತಡ ಹೆಚ್ಚಾಗಿ ನೀರು ತನ್ನ ಪಥ ಬದಲಿಸಿ ಸುತ್ತಮುತ್ತಲಿನ ಜಮೀನುಗಳಿಗೆ ನುಗ್ಗಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಪ್ರವಾಹ ತಡೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವಿಧ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

***************

ಸ್ಥಳೀಯವಾಗಿ ಮೀನು ಸೇವನೆ ಪ್ರೋತ್ಸಾಹಿಸಲು ಹಾಗೂ ತಾಜಾ ಮೀನು ಮತ್ತು ಮೀನು ಉತ್ಪನ್ನಗಳ ಮಾರಾಟಕ್ಕಾಗಿ "ಮತ್ಸ್ಯವಾಹಿನಿ" ಯೋಜನೆಯಡಿ ತ್ರಿಚಕ್ರ ವಾಹನಗಳನ್ನು ಬಾಡಿಗೆ ಆಧಾರದಲ್ಲಿ ಪಡೆಯಲು ಆಸಕ್ತ ಮೀನು ಮಾರಾಟಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ನವೆಂಬರ್ ೧೧ ಕೊನೆಯ ದಿನವಾಗಿದ್ದು ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ಶಿರಸಿ, ಮುಂಡಗೋಡ, ಯಲ್ಲಾಪುರ, ಹಳಿಯಾಳ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಮೀನುಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***************

ಕೋಲಾರ ಜಿಲ್ಲೆಯಲ್ಲಿ ಉಚಿತ ಕಾಲಬಾಯಿ ರೋಗ ಲಸಿಕಾ ಅಭಿಯಾನ ಇದೇ ತಿಂಗಳ ೨೧ ರಿಂದ ಆರಂಭವಾಗಿದ್ದು, ನವೆಂಬರ್ ೨೦ ರವರೆಗೆ ಜಾನುವಾರಗಳಿಗೆ ಲಸಿಕೆ ಹಾಕಲಾಗುತ್ತದೆ ಎಂದು ಪಶು ಇಲಾಖೆಯ ಉಪ ನಿರ್ದೇಶಕ ಡಾ.ತುಳಸಿ ಗಂಗರಾಮಯ್ಯ ತಿಳಿಸಿದ್ದಾರೆ.

****************

ಇದೇ ೨೮ ಸೋಮರಾರದಿಂದ ಆಕಾಶವಾಣಿ ಧಾರವಾಡ ಕೇಂದ್ರದ ಸಹ ಪ್ರಸಾರದಲ್ಲಿ ಮಧ್ಯಾಹ್ನ ೧೨ ಗಂಟೆಗೆ ೫ ನಿಮಿಷಗಳ ಕಾಲ ಪ್ರದೇಶ ಸಮಾಚಾರ ಮೂಡಿಬರಲಿದೆ. ರಾಜ್ಯದ ಎಲ್ಲಾ ಬಾನುಲಿ ಕೇಂದ್ರಗಳಿಂದಲೂ ಈ ವಾರ್ತಾ ಪ್ರಸಾರ ಏಕಕಾಲಕ್ಕೆ ಪ್ರಸಾರವಾಗಲಿದೆ.

****************

ಪ್ರಧಾನಿ ನರೇಂದ್ರ ಮೋದಿ ಅವರು ಇದೇ ೨೭ ರಂದು ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೆಡಿಯೊ ಕಾರ್ಯಕ್ರಮದ ೧೧೫ ನೇ ಆವೃತ್ತಿಯಾಗಿದೆ.

ಟೋಲ್ ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಜನರು ಕಾರ್ಯಕ್ರಮಕ್ಕೆ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಸಲ್ಲಿಸಬಹುದು. ಜನರು ತಮ್ಮ ಸಲಹೆಗಳನ್ನು ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ ಮೈಗೌ ಓಪನ್ ಫೋರಂ ಮೂಲಕ ಆನ್ ಲೈನ್ ನಲ್ಲಿ ಹಂಚಿಕೊಳ್ಳಬಹುದು. ಮುಂಬರುವ ಸಂಚಿಕೆಯ ಸಲಹೆಗಳನ್ನು ನಾಳೆಯವರೆಗೆ ಸ್ವೀಕರಿಸಲಾಗುತ್ತದೆ.

ಈ ಕಾರ್ಯಕ್ರಮವು ಆಕಾಶವಾಣಿ ಮತ್ತು ದೂರದರ್ಶನದ ಸಂಪೂರ್ಣ ನೆಟ್ವರ್ಕ್, ಎಐಆರ್ ನ್ಯೂಸ್ ವೆಬ್ ಸೈಟ್ ಮತ್ತು ನ್ಯೂಸ್ ಆನ್ ಏರ್, ಮೊಬೈಲ್ ಅಪ್ಲಿಕೇಶನ್ ನಲ್ಲಿಯೂ ಪ್ರಸಾರವಾಗಲಿದೆ.

ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪಿಎಂಒ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್ ಗಳಲ್ಲಿ ಇದು ನೇರ ಪ್ರಸಾರವಾಗಲಿದೆ. ಹಿಂದಿ ಪ್ರಸಾರವಾದ ಕೂಡಲೇ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಾದೇಶಿಕ ಭಾಷೆಗಳಲ್ಲಿ ಪ್ರಸಾರ ಮಾಡಲಿದೆ.

*******ಮುಕ್ತಾಯ*******